# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 415 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10.07.2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಶಿವಮೊಗ್ಗ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಹಾಗೂ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ದಿನನಿತ್ಯ ಒಳ ಮತ್ತು ಹೊರ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ |
| ಆ | ಒಳ ಹಾಗೂ ಹೊರ ರೋಗಿಗಳ ಅನುಕೂಲಕ್ಕಾಗಿ ಕಲ್ಪಿಸಿರುವ ಮೂಲಭೂತ ಸೌಕರ್ಯಗಳೇನು: | ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಒಳ ಹಾಗೂ ಹೊರ ರೋಗಿಗಳ ಚಿಕಿತ್ಸೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳು ಹಾಗೂ ಖಾಲಿಯಿರುವ ಸಿಬ್ಬಂದಿ ಕೊರತೆ ನೀಗಿಸಲು ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ.<br><br>1. ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ವಿದ್ಯುತ್ ವ್ಯತ್ಯಯ ಸಂದರ್ಭದಲ್ಲಿ ತುರ್ತು ಉಪಯೋಗಕ್ಕೆ ಜನರೇಟರ್‌ಗಳನ್ನು ಅಳವಡಿಸಲಾಗಿರುವುದರಿಂದ ದಿನದ 24 ಗಂಟೆ ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆ.<br>2. ಜಿಲ್ಲೆಯಲ್ಲಿ ಸರಬರಾಜಾದ ಔಷಧಗಳನ್ನು ರೋಗಿಗಳಿಗೆ ವಿತರಿಸಲಾಗುತ್ತಿದ್ದು, ಇದಲ್ಲದೇ ತುರ್ತು ಅಗತ್ಯವಿರುವ ಸಂದರ್ಭದಲ್ಲಿ A.B.R.K ಆಯಾ ಆಸ್ಪತ್ರೆಯ ಬಳಕೆದಾರರ ನಿಧಿ ಹಾಗೂ NHM ನಿಧಿಯಿಂದ ಔಷಧ ಮತ್ತು ರಾಸಾಯನಿಕಗಳನ್ನು ಖರೀದಿಸಿ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ.<br><br>ಇಲಾಖೆಯಲ್ಲಿ ಖಾಲಿ ಇರುವ ವೈದ್ಯಕೀಯ ಹಾಗೂ ಅರೆ ವೈದ್ಯಕೀಯ ಮತ್ತು ಇತರೆ ಸಿಬ್ಬಂದಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>1. ಪತ್ರ ಸಂಖ್ಯೆ : ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ : 13/12/2022ರಲ್ಲಿ ರಾಜ್ಯದಲ್ಲಿ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>2. ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ. |
| ಇ | ಶಿವಮೊಗ್ಗ ಕ್ಷೇತ್ರದ ಬಹಳಷ್ಟು ಭಾಗಗಳಲ್ಲಿ ವಿದ್ಯುತ್ ಕೊರತೆ,ಸಿಬ್ಬಂದಿ ಕೊರತೆ ಹಾಗೂ ಅವಶ್ಯಕ ಔಷಧಿಗಳ ಸಂಗ್ರಹದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:ಈ ಮೂಲಸೌಕರ್ಯಗಳ ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

| | | |
|---|---|---|
| | | 3. ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಒಂದು ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞ ವೈದ್ಯ ಅಭ್ಯರ್ಥಿಗಳನ್ನು ವೈದ್ಯರ/ತಜ್ಞರ , ಹುದ್ದೆಗಳಿಗೆ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.<br>4. ಅಧಿಸೂಚನೆ ಸಂಖ್ಯೆ : ಆಕುಕ 709 ಹೆಚ್‌ಎಸ್‌ಎಂ 2017, ದಿನಾಂಕ : 17/05/2022ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ವಿವಿಧ ವೃಂದದ 320 ಅರೆ ವೈದ್ಯಕೀಯ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಗೆ ಅನುಮತಿ ನೀಡಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ.<br>5. ಕಿರಿಯ ವೈದ್ಯಕೀಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ 150 ಮತ್ತು ಫಾರ್ಮಸಿ ಅಧಿಕಾರಿ 400 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವವರೆಗೂ ಹೊರಗುತ್ತಿಗೆ ಆಧಾರದ ಮೇಲ ಭರ್ತಿ ಮಾಡಲು ಕ್ರಮವಹಿಸಲಾಗಿದೆ.<br>6. ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಯಾದಂತಹ 427 ದ್ವಿತೀಯ ದರ್ಜೆ ಸಹಾಯಕರ ಮೂಲ ದಾಖಲೆ ಪರಿಶೀಲನ ಪ್ರಕ್ರಿಯೆ ಚಾಲ್ತಿಯಲ್ಲಿದೆ.<br>7. ಅನುಕಂಪ ಆಧಾರದಡಿ ನೇರ ನೇಮಕಾತಿ ಮೂಲಕ ಒಟ್ಟು 225 ಅರೆ ವೈದ್ಯಕೀಯ ಮತ್ತು ಇತರೆ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.<br>8. ಖಾಲಿ ಇವರು ಹುದ್ದೆಗಳಲ್ಲಿ ತುರ್ತು ಅಗತ್ಯದ ಅಧಿಕಾರಿ/ಸಿಬ್ಬಂದಿಗಳನ್ನು ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ. |

**ಆಕುಕ 44 ಹೆಚ್ ಪಿಸಿ 2023**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**